ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ಹೈಕೋರ್ಟ್ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ          ದಿನಾಂಕ : DATE : 20/10/20

**ಆದೇಶ** ಅಧ್ಯಕ್ಷ-ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿ

# ಪುರಸಭೆ, ಪಟ್ಟಣ ಪಂಚಾಯಿತಿ ಮೀಸಲಿಗೂ ಹೈಕೋರ್ಟ್ ತಡೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು



ರಾಜ್ಯದ 59 ನಗರ ಸಭೆಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಹುದ್ದೆಗೆ ಮೀಸಲು ನಿಗದಿಪಡಿಸಿ ರಾಜ್ಯ ಸರ್ಕಾರ ಹೊರಡಿಸಿದ್ದ ಅಧಿಸೂಚನೆಗೆ ಇತ್ತೀಚೆಗೆ ತಡೆಯಾಜ್ಞೆ ನೀಡಿದ್ದ ಹೈಕೋರ್ಟ್, ಇದೀಗ ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ಅಧ್ಯಕ್ಷ-ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿ ಅಧಿಸೂಚನೆಗೂ ಮಧ್ಯಂತರ ತಡೆಯಾಜ್ಞೆ ನೀಡಿದೆ.

ಮೀಸಲಾತಿ ಅಧಿಸೂಚನೆ ಪ್ರಶ್ನಿಸಿ ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ಪುರಸಭೆ, ದಾವಣಗೆರೆ ಜಿಲ್ಲೆ ಚನ್ನಗಿರಿ ಪುರಸಭೆ, ಕೊಡಗು ಜಿಲ್ಲೆ ಸೋಮವಾರಪೇಟೆ ಪಟ್ಟಣ ಪಂಚಾಯಿತಿ ಅಧ್ಯಕ್ಷ-ಉಪಾಧ್ಯಕ್ಷ ಮೀಸಲಾತಿ ಪ್ರಶ್ನಿಸಿ ಸಲ್ಲಿಸಿದ್ದ ತಕರಾರು ಅರ್ಜಿಯನ್ನು ಸೋಮವಾರ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಆರ್. ದೇವದಾಸ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಈ ಆದೇಶ ನೀಡಿದೆ.

ನಗರಸಭೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆಗೆ ಮೀಸಲಾತಿ ಅಧಿಸೂಚನೆಗೆ ಮಧ್ಯಂತರ ತಡೆ ನೀಡಲಾಗಿದೆ. ಆ ಅರ್ಜಿಗಳಲ್ಲಿ ಎತ್ತಲಾಗಿದ್ದ ಆಕ್ಷೇಪಗಳನ್ನು ಈಗಿನ ಅರ್ಜಿಗಳಲ್ಲಿ ಎತ್ತಲಾಗಿದೆ. ಹಾಗಾಗಿ, ಪುರಸಭೆ, ಪಟ್ಟಣ ಪಂಚಾಯಿತಿ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳಿಗೆ ಮೀಸಲಾತಿ ನಿಗದಿಪಡಿಸಿ ರಾಜ್ಯ ಸರ್ಕಾರ ಅ.8ರಂದು ಹೊರಡಿಸಿರುವ ಅಧಿಸೂಚನೆಗೆ ಮುಂದಿನ ವಿಚಾರಣೆಗೆವರೆಗೆ ತಡೆ ನೀಡಲಾಗುತ್ತಿದೆ ಎಂದು ಹೈಕೋರ್ಟ್ ಆದೇಶದಲ್ಲಿ ಹೇಳಿದೆ. ಅಲ್ಲದೆ, ಈಗಾಗಲೇ ಯಾವುದಾದರೂ ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳಿಗೆ ಚುನಾವಣೆ ನಡೆಸಿದರೆ, ಅದರ ಫಲಿತಾಂಶವು ಈ ಅರ್ಜಿ ಕುರಿತು ನ್ಯಾಯಾಲಯ ಹೊರಡಿಸುವ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ ಎಂದು ನ್ಯಾಯಪೀಠ ಇದೇ ವೇಳೆ ಸ್ಪಷ್ಟಪಡಿಸಿದೆ. ಈ ವಾದ-ಪ್ರತಿವಾದ ಆಲಿಸಿದ ನ್ಯಾಯಪೀಠ, ಅಡ್ವೋಕೇಟ್ ಜನರಲ್ ಅರ್ಜಿಗಳ ವಿಚಾರಣಾ ಮಾನ್ಯತೆ ಪ್ರಶ್ನೆ ಮಾಡಿದ್ದಾರೆ. ಹೀಗಾಗಿ, ಅರ್ಜಿಗಳನ್ನು ತ್ವರಿತ ಇತ್ಯರ್ಥಕ್ಕೆ ಪರಿಗಣಿಸಲಾಗುತ್ತದೆ. ಆದರೆ, ಅ.8ರ ಅಧಿಸೂಚನೆಗೆ ಮುಂದಿನ ವಿಚಾರಣೆವರೆಗೆ ತಡೆ ನೀಡಲಾಗುತ್ತಿದೆ ಎಂದು ವಿಚಾರಣೆಯನ್ನು ಅ.21ಕ್ಕೆ ಮುಂದೂಡಿತು.